೮೧

ಮೈಸೂರ ಗಿಜಿಟ.

ಸಂ. XXXI. ಸರ್ಕಾರದಿಂದ ಘಾಯಿಷ್ ಆದ್ದು. [ನಂ. 48.

ಬೆಂಗಳೂರು, ಗುರುವಾರ, ಡಿಸೆಂಬರ್ ತಾ॥ 3, ಸ॥ 1896.

IIನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜೀರು ವಗೈರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆ.ಗಳು.

ಫಾರೆಸ್ಟ್ಸ್ ಇಲಾಖಾ.

ನೋಟಿಸ್

ತಾರೀಖು 29ನೇ ಆಗಸ್ಟ್ 1894.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಕೆಳಗೆ ನಮೂದಿರುವ 12 ಕಬ್ಬಿಣದ ಆಲೆಗಳು ಬೆಂಗಳೂರು ಕೋಟೆಯಲ್ಲಿ ಹಳೇಸುಲ್ತಾನ್ ಮಹಲಿನಲ್ಲಿರುವ ಫಾರೆಸ್ಟ್ಸ್ ಇಲಾಖಾ ಇನ್ಸ್‌ಪೆಕ್ಟರ್ ಜನರಲ್ ಸಾಹೇಬರವರ ಆಫಿಸಿನಲ್ಲಿ ಖರೀದಿಗೆ ದೊರೆಯುತ್ತೆ.

ನಂಬರ್.	ತಯಾರ್ ಮಾಡಿದ ಕಾರ್ಖಾನೆ ಹೆಸರು.	ಅಸಲ್ ಖರೀದಿ (ರೂಪಾಯಿ)
7	ಬೆಂಗಳೂರು ರಿಕ್ಕಿಯವರ ಕಾರ್ಖಾನೆ	ಒಂದಕ್ಕೆ 150
2	ಇಂಗ್ಲಾಂಡ್ ಪೋರ್ಟರು ಬ್ರದರ್‌ಸರ ಡಿಟೋ	,, 170
1	ಮದ್ರಾಸ್ ಓಕ್ಸರವರ ಡಿಟೋ	,, 250
1	ಡಿಟೋ ಡಿಟೋ ಡಿಟೋ	,, 188
1	ಡಿಟೋ ಬೋರ್ಯಾಮ್‌ರವರ ಡಿಟೋ	,, 85

ಖರೀದೀದಾರು ವ್ಯವಸಾಯ ಮಾಡುವವರಾಗಿದ್ದಲ್ಲಿ ಅಸಲ್ ಖರೀದಿಯಲ್ಲಿ ಶೇಕಡಾ $10\frac{1}{2}$ ರೂಪಾಯಿ ಸೋಡಿಯಿಂದ ವಿಕ್ಕಯಿಸಲ್ಪಡುವದು.

ಯಲ್. ರಿಕ್ಕೆಟ್ಸ್,
ಇನ್ಸ್‌ಪೆಕ್ಟರ್ ಜನರಲ್ ಆಫ್ ಫಾರೆಸ್ಟ್ಸ್.